ಕರ್ನಾಟಕ ಸರ್ಕಾರ

# ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು

ಸಂಖ್ಯೆ : ಬಿ1(ಬಿ6)/ಸಿಸಿಟಿವಿ/IMP/04/2017-18 ದಿನಾಂಕ:21-03-2018

"ಜ್ಞಾಪನ"

ವಿಷಯ:- 2018ರ ಎಸ್.ಎಸ್.ಎಲ್.ಸಿ. ಪರೀಕ್ಷೆಯನ್ನು ಸಮರ್ಪಕವಾಗಿ ಹಾಗೂ ಸುರಕ್ಷತವಾಗಿ ನಡೆಸುವ ಸಂಬಂಧ ಅಗತ್ಯ ಕ್ರಮಕೈಗೊಳ್ಳುವ ಕುರಿತು.

**********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2018ನೇ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆಗಳು 23-03-2018 ರಿಂದ ಪ್ರಾರಂಭವಾಗಿ ದಿನಾಂಕ:06-04-2018ಕ್ಕೆ ಮುಕ್ತಾಯವಾಗಲಿದ್ದು. ಪರೀಕ್ಷೆಯನ್ನು ಸಮಗ್ರತೆಯಿಂದ ಹಾಗೂ ಸುರಕ್ಷಿತವಾಗಿ ನಡೆಸುವ ಸಂಬಂಧ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.

1. ರಾಜ್ಯದ ಒಟ್ಟು 2817 ಪರೀಕ್ಷಾ ಕೇಂದ್ರಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಿ ಪರೀಕ್ಷಾ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ತರಲಾಗಿದೆ.
2. ಪರೀಕ್ಷಾ ಕೇಂದ್ರಗಳಿಗೆ ಅನಗತ್ಯ ವ್ಯಕ್ತಿಗಳ ಪ್ರವೇಶ ನಿರ್ಬಂಧಿಸಲು ಪರೀಕ್ಷಾ ಕಾರ್ಯದಲ್ಲಿ ತೊಡಗಿಕೊಂಡಿರುವ ಪ್ರತಿಯೊಬ್ಬ ಅಧಿಕಾರಿ/ನೌಕರರಿಗೆ ಗುರುತಿನ ಚೀಟಿ ಕಡ್ಡಾಯಗೊಳಿಸಲಾಗಿದೆ.
3. ಪರೀಕ್ಷಾ ಕೇಂದ್ರದಲ್ಲಿ ಮೊಬೈಲ್ ಉಪಯೋಗಿಸುವುದನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ.
4. ಪರೀಕ್ಷಾ ಅವ್ಯವಹಾರವನ್ನು ತಡೆಗಟ್ಟುವ ನಿಟ್ಟಿನಲ್ಲಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ನೇತೃತ್ವದ ಜಾಗೃತದಳಗಳನ್ನು ರಚಿಸಲಾಗಿದ್ದು, ಸದರಿ ತಂಡಗಳು ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿದಂತಹ ಸಂದರ್ಭದಲ್ಲಿ ಸಿಸಿಟಿವಿ ಕ್ಯಾಮೆರಾಗಳು ಕಾರ್ಯನಿರ್ವಹಿಸುತ್ತಿರುವ ಬಗ್ಗೆ ಪರಿಶೀಲಿಸಿ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ತಮ್ಮ ಭೇಟಿ ವರದಿಯಲ್ಲಿ ದಾಖಲಿಸುವುದು. ಅದೇ ರೀತಿ ಪರೀಕ್ಷಾ ಕೇಂದ್ರಗಳಿಗೆ ಆಗಮಿಸುವ ಸಿಟ್ಟಿಂಗ್ ಸ್ಕ್ವಾಡ್ ಮತ್ತು ಮೊಬೈಲ್ ಸ್ಕ್ವಾಡ್‌ಗಳು ಈ ಬಗ್ಗೆ ಪರೀಶೀಲಿಸಿ ಖಾತ್ರಿ ಪಡಿಸಿಕೊಳ್ಳುವುದು ಮತ್ತು ಭೇಟಿ ವರದಿಯಲ್ಲಿ ದಾಖಲಿಸುವುದು.
5. ಪರೀಕ್ಷೆ ನಡೆಯುವ ಎಲ್ಲಾ ದಿನಗಳಲ್ಲೂ ಸಿಸಿಟಿವಿ ಕ್ಯಾಮೆರಾಗಳು ಕಾರ್ಯನಿರ್ವಹಿಸುವಂತೆ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರುಗಳು ಅಗತ್ಯ ಕ್ರಮಕೈಗೊಳ್ಳುವುದು ಹಾಗೂ ಪರೀಕ್ಷೆಯ ಪ್ರಾರಂಭದಿಂದ ಮುಕ್ತಾಯದ ವರೆಗಿನ ಸಿಸಿಟಿವಿ ಕ್ಯಾಮೆರಾಗಳಲ್ಲಿ ಸೆರೆಯಾಗಿರುವಂತಹ ಎಲ್ಲಾ ವಿಡಿಯೋ ತುಣುಕುಗಳನ್ನು ಪರೀಕ್ಷೆಗಳು ಮುಕ್ತಾಯಗೊಂಡ ನಂತರ ಪೆನ್‌ಡ್ರೈವ್‌ನಲ್ಲಿ ದಾಖಲಿಸಿ ಮಂಡಳಿಗೆ ರವಾನಿಸುವುದು.
6. ಪರೀಕ್ಷಾ ಪೂರ್ವದಲ್ಲಿ ಅಥವಾ ಮುಕ್ತಾಯದ ಸಂದರ್ಭದಲ್ಲಿ ಯಾವುದೇ ಪರೀಕ್ಷಾ ಅವ್ಯವಹಾರದಲ್ಲಿ ತೊಡಗಿರುವುದು ಕಂಡು ಬಂದಲ್ಲಿ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು ಹಾಗೂ ಸಂಬಂಧಿಸಿದವರ ಮೇಲೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು. ಹಾಗೂ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಉಪನಿರ್ದೇಶಕರುಗಳ ವಿರುದ್ಧ ಅಗತ್ಯ ಶಿಸ್ತು ಕ್ರಮಕೈಗೊಳ್ಳಲಾಗುವುದು. ಈ ಸಂಬಂಧ **The Karnataka Education Act, 1983. The Karnataka Education(Amendment) BILL, 2017** ರಂತೆ **Substitution of section 115** ರಲ್ಲಿ **for section 115 of the principal Act, the following shall be substituted, namely:- "115.Penalty for contravention of section 23 or**

section 24A. – Any person who contravenes the provision of section 23 section 24A shall on conviction, be punished with imprisonment for a term which may extend to five years or with fine which may extend to five lakhs rupees or with both." ಎಂಬ ಅಂಶವನ್ನು ಗಮನ ಸೆಳೆಯಲಾಗಿದೆ.

ಈ ಬಗ್ಗೆ ಅಗತ್ಯ ಕ್ರಮಕೈಗೊಳ್ಳುವಂತೆ ಸಂಬಂಧಿಸಿದ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರುಗಳಿಗೆ ಹಾಗೂ ಪರೀಕ್ಷಾ ಕಾರ್ಯದಲ್ಲಿ ತೊಡಗಿರುವ ಎಲ್ಲಾ ಅಧಿಕಾರಿ & ಸಿಬ್ಬಂದಿಯವರಿಗೆ ಸೂಕ್ತ ಮಾರ್ಗದರ್ಶನವನ್ನು ನೀಡಲು ಸೂಚಿಸಿದೆ.

(ಡಾ.ಪಿ.ಸಿ.ಜಾಫರ್)
ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ

ಗೆ,

1. ರಾಜ್ಯ ಎಲ್ಲಾ ಉಪನಿರ್ದೇಶಕರು(ಆಡಳಿತ) ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಅಗತ್ಯ ಕ್ರಮಕ್ಕಾಗಿ,
2. ರಾಜ್ಯ ಎಲ್ಲಾ ಎಸ್.ಎಸ್.ಎಲ್.ಸಿ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರುಗಳಿಗೆ ಸಂಬಂಧಿಸಿದ ಜಿಲ್ಲಾ ಉಪ ನಿರ್ದೇಶಕರು(ಆಡಳಿತ)/ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ ಅಗತ್ಯ ಕ್ರಮಕ್ಕಾಗಿ.

ಪ್ರತಿಯನ್ನು:-

1. ಮಾನ್ಯ ನಿರ್ದೇಶಕರು, ಪರೀಕ್ಷೆಗಳು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು ರವರಿಗೆ ಅಗತ್ಯ ಕ್ರಮಕ್ಕಾಗಿ.
2. ಕಛೇರಿ ಪ್ರತಿ.